# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 484 |
| ಸದಸ್ಯರ ಹೆಸರು | : | ಶ್ರೀ ಸುನೀಲ್‌ಗೌಡ ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 10-07-2023 |
| ಉತ್ತರಿಸುವವರು | : | ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಅರಣ್ಯ ಪ್ರದೇಶಗಳಿಗೆ ಹೊಂದಿಕೊಂಡಂತಹ ರೆಸಾರ್ಟ್ಸ್ ಹಾಗೂ ಹೊಟೇಲ್‌ಗಳಿಂದಾಗಿ ಮತ್ತು ಅಲ್ಲಿ ಬರುವ ಪ್ರವಾಸಿಗರ ಚಟುವಟಿಕೆಗಳಿಂದಾಗಿ ವನ್ಯ ಜೀವಿಗಳಿಗೆ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೌದಾದಲ್ಲಿ ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು; | ಸಂರಕ್ಷಿತ ಅರಣ್ಯ ಪ್ರದೇಶಗಳಿಗೆ ಹೊಂದಿಕೊಂಡಂತಹ ರೆಸಾರ್ಟ್ಸ್ ಹಾಗೂ ಹೋಟೆಲ್‌ಗಳಿಂದಾಗಿ ಮತ್ತು ಅಲ್ಲಿ ಬರುವ ಪ್ರವಾಸಿಗರ ಚಟುವಟಿಕೆಗಳಿಂದಾಗಿ ವನ್ಯಜೀವಿಗಳಿಗೆ ತೊಂದರ ಉಂಟಾಗುತ್ತಿರುವ ಬಗ್ಗೆ ಯಾವುದೇ ವರದಿಗಳು ಸ್ವೀಕೃತವಾಗಿರುವುದಿಲ್ಲ. |
| (ಆ) | ಅರಣ್ಯ ಪ್ರದೇಶಗಳಿಗೆ ಹೊಂದಿಕೊಂಡಿರುವ ರೇಸಾರ್ಟ್ಸ್‌ಗಳಿಗೆ ಬರುವ ಪ್ರವಾಸಿಗರು ಜೋರಾಗಿ ಸಂಗೀತ ನುಡಿಸುವುದು ಮತ್ತು ಪ್ಲಾಸ್ಟಿಕ್‌ನಂತಹ ವಸ್ತುಗಳನ್ನು ಹರಡುತ್ತಿರುವುದರಿಂದ ವನ್ಯ ಜೀವಿಗಳಿಗೆ ತೊಂದರೆ ಉಂಟಾಗುತ್ತಿದ್ದು ಇದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ? (ವಿವರ ನೀಡುವುದು) | ಸಂರಕ್ಷಿತ ಅರಣ್ಯ ಪ್ರದೇಶಗಳಿಗೆ ಹೊಂದಿಕೊಂಡಿರುವ ರೆಸಾರ್ಟ್ಸ್‌ಗಳಿಗೆ ಬರುವ ಪ್ರವಾಸಿಗರು ಜೋರಾಗಿ ಸಂಗೀತ ನುಡಿಸುವ ಮೂಲಕ ವನ್ಯಪ್ರಾಣಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ವರದಿಗಳು ಸ್ವೀಕೃತವಾಗಿರುವುದಿಲ್ಲ. ಮುಂದುವರೆದು ಸಂರಕ್ಷಿತ ಪ್ರದೇಶಗಳನ್ನು ಪ್ಲಾಸ್ಟಿಕ್ ಮುಕ್ತಗೊಳಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>1. ಪ್ಲಾಸ್ಟಿಕ್ ನಂತಹ ವಸ್ತುಗಳನ್ನು ಹರಡಿಸುವುದನ್ನು ತಪ್ಪಿಸುವ ಸಲುವಾಗಿ ರಸ್ತೆ ಬದಿಯಲ್ಲಿ ಬಿದ್ದಿರುವ ಪ್ಲಾಸ್ಟಿಕ್‌ಗಳನ್ನು ಸಂಗ್ರಹಿಸಿ ಪುನರ್ ಬಳಕೆ ಮಾಡಲು ಸಂಬಂಧಿಸಿದ ಗ್ರಾಮ ಪಂಚಾಯಿತಿಯವರಿಗೆ ಹಸ್ತಾಂತರಿಸಲಾಗುತ್ತಿದೆ.<br><br>2. ಅರಣ್ಯ ಪ್ರದೇಶದಲ್ಲಿ ಹಾದು ಹೋಗುವ ರಸ್ತೆಗಳಲ್ಲಿ ಸಂಗ್ರಹವಾಗುವ ಪ್ಲಾಸ್ಟಿಕ್ ಪದಾರ್ಥಗಳನ್ನು ಶೇಖರಣೆ ಮಾಡಿ ವಿಲೇಮಾರಿ ಮಾಡಲು ಅಧೀನ ಸಿಬ್ಬಂದಿಗಳಿಗೆ ಸೂಚನೆ ನೀಡಲಾಗಿದೆ.<br><br>3. ಹುಲಿ ಸಂರಕ್ಷಿತ ಪ್ರದೇಶವನ್ನು ಪ್ರವೇಶಿಸುವ ವಾಹನಗಳನ್ನು ಮುಖ್ಯ ದ್ವಾರದಲ್ಲಿ ತಪಾಸಣೆ ಮಾಡಿ, ಪ್ರವಾಸಿಗರು ತರುವ ಪ್ಲಾಸ್ಟಿಕ್‌ಗಳನ್ನು ಸಂಗ್ರಹಿಸಿ ತ್ಯಾಜ್ಯ ವಸ್ತುಗಳನ್ನು ಶೇಖರಣೆ ಮಾಡುವ ಕಾರ್ಯ ಕೈಗೊಳ್ಳಲಾಗುತ್ತಿದ್ದು, ಪ್ಲಾಸ್ಟಿಕ್ ವಸ್ತುಗಳ ನಿರ್ಮೂಲನೆಯ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಸೂಚನಾ ಫಲಕಗಳನ್ನು ಅಳವಡಿಸಲಾಗಿದೆ. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | 4. ಹುಲಿ ಸಂರಕ್ಷಿತ ಪ್ರದೇಶಗಳನ್ನು ಪ್ಲಾಸ್ಟಿಕ್ ಮುಕ್ತವಾಗಿಸಲು ಪರಿಸರ ಸ್ನೇಹಿ ಜೂಟ್ ಹಾಗೂ ಕಾಂಪೋಸ್ಟಬಲ್ ಸಾಮಗ್ರಿಗಳಿಂದ ತಯಾರಿಸಲಾದ ಬ್ಯಾಗ್ಸ್ ಹಾಗೂ ಮೆಟಲ್ ಅಥವಾ ನ್ಯಾಚುರಲ್ ಫೈಬರ್ ನಿಂದ ತಯಾರಿಸಲಾದ ಬಾಟಲ್ ಗಳನ್ನು ಪ್ರವಾಸಿಗರಿಗೆ ಪ್ರವೇಶ ದ್ವಾರದಲ್ಲಿ ಒದಗಿಸಲು ಹಾಗೂ ಅದಕ್ಕೆ ತಗಲುವ ಮೊತ್ತವನ್ನು ಪ್ರವಾಸಿಗರಿಂದ ಕ್ರಮ ಕೈಗೊಳ್ಳುವಂತೆ ವಿಭಾಗಧಿಕಾರಿಗಳಿಗೆ ಸೂಚಿಸಲಾಗಿದೆ. |

**ಸಂಖ್ಯೆ: ಅಪಜೀ 73 ಎಫ್ಎಪಿ 2023**

**(ಈಶ್ವರ ಬಿ. ಖಂಡ್ರೆ)**
ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು